## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸನಗೌಡ ಬಾದರ್ಲಿ ರವರು ನಿಯಮ-72 ರಡಿ ಗಮನ ಸೆಳೆದಿರುವ ಸೂಚನೆಗೆ ಉತ್ತರ:

ವಿಷಯ: ನಾಲ್ಕು ಜಿಲ್ಲೆಗಳಾದ ಕೊಪ್ಪಳ, ರಾಯಚೂರು, ಬಳ್ಳಾರಿ ಹಾಗೂ ಕಲ್ಬುರ್ಗಿಯಲ್ಲಿ ಸೋನಾ ಮಸೂರಿ ಭತ್ತದ ತಳಿಯ ಅಭಿವೃದ್ಧಿಯ ಹಿತದೃಷ್ಟಿಯಿಂದ ಹಾಗೂ ರೈತರಿಗೆ ಪ್ರೋತ್ಸಾಹ ನೀಡಲು ತೊಗರಿ ಅಭಿವೃದ್ಧಿ ಮಂಡಳಿಯಂತೆ ಭತ್ತ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸುವ ಬಗ್ಗೆ.

ಉತ್ತರ: ರಾಜ್ಯದಲ್ಲಿ 2023-24 ನೇ ಸಾಲಿನಲ್ಲಿ 31.27 ಲಕ್ಷ ಟನ್ ಅಕ್ಕಿಯನ್ನು ಉತ್ಪಾದಿಸಲಾಗಿರುತ್ತದೆ ಹಾಗೂ 2024-25ನೇ ಸಾಲಿನಲ್ಲಿ ಮೊದಲನೇ ಅಂದಾಜಿನ ಪ್ರಕಾರ 30.18 ಲಕ್ಷ ಟನ್‌ಗಳಷ್ಟಿರುತ್ತದೆ. ರಾಜ್ಯದಲ್ಲಿ 2024-25ನೇ ಸಾಲಿನಲ್ಲಿ ... 

ರಾಜ್ಯದಲ್ಲಿ ಕೃಷಿ ವಿಶ್ವವಿದ್ಯಾಲಯಗಳ ಹಲವು ಸಂಶೋಧನಾ ಕೇಂದ್ರಗಳು ಭತ್ತ ತಳಿ ಸಂಶೋಧನೆಯಲ್ಲಿ ತೊಡಗಿವೆ (ಮಂಡ್ಯ, ಪೊನ್ನಂಪೇಟೆ, ಬ್ರಹ್ಮಾವರ, ಶಿರಗುಪ್ಪ, ಸಿಂಧನೂರು, ಶಿವಮೊಗ್ಗ (ನವಿಲೆ), ದಾವಣಗೆರೆ (ಕತ್ತಲಗೆರೆ), ಧಾರವಾಡ (ಮುಗದ), ಶಿರಸಿ, (ಮೂಡಿಗೆರೆ). ಕರ್ನಾಟಕ ರಾಜ್ಯ ಬೀಜ ನಿಗಮ ಹಾಗೂ ಕೃಷಿ ವಿಶ್ವವಿದ್ಯಾಲಯಗಳು ಉತ್ತಮ ಗುಣಮಟ್ಟದ ಭತ್ತದ ಬೀಜವನ್ನು ಉತ್ಪಾದಿಸಿ ರೈತರಿಗೆ ವಿತರಿಸುತ್ತಿವೆ. ಭತ್ತದ ಸಗಟು ಬೆಲೆಯು ಕೇಂದ್ರ ಸರ್ಕಾರ ಘೋಷಿತ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಗೆ ಮಾರಾಟವಾಗುವ ಸಂದರ್ಭಗಳಲ್ಲಿ ಬೆಂಬಲ ಬೆಲೆಯಲ್ಲಿ ಭತ್ತವನ್ನು ಖರೀದಿಸಲಾಗುತ್ತದೆ. ಹಾಗೆಯೇ, ಉತ್ಕೃಷ್ಟ ಗುಣಮಟ್ಟದ ಭತ್ತವನ್ನು ರಫ್ತು ಮಾಡಲು 'ಅಪೇಡಾ' ಹಾಗೂ 'ಕಪೆಕ್' ಸಂಸ್ಥೆಗಳು ಪೂರಕವಾಗಿ ಕಾರ್ಯ ನಿರ್ವಹಿಸುತ್ತಿವೆ.

ರಾಜ್ಯದಲ್ಲಿ ಭತ್ತ ಅಭಿವೃದ್ಧಿ ಮಂಡಳಿ ಸ್ಥಾಪಿಸುವ ಕುರಿತು ಜನಪ್ರತಿನಿಧಿಗಳಿಂದ ಬೇಡಿಕೆ ಬಂದಿರುತ್ತದೆ. ಆದರೆ, ರಾಜ್ಯದಲ್ಲಿ ಕೃಷಿ ವಿಶ್ವ ವಿದ್ಯಾಲಯಗಳು ಮತ್ತು ಅನೇಕ ಕೃಷಿ ಸಂಶೋಧನಾ ಕೇಂದ್ರಗಳು ಭತ್ತದ ತಾಂತ್ರಿಕತೆಗಳ ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ತೊಡಗಿರುತ್ತವೆ. ಹಾಗೂ ರಾಜ್ಯದಲ್ಲಿ ಭತ್ತವನ್ನು ಸಾರ್ವಜನಿಕ ವಿತರಣೆ ಮತ್ತು ಇತರೆ ಯೋಜನೆಗಳಡಿ ಬಳಸಿಕೊಳ್ಳಲು ಸಾಕಷ್ಟು ಪ್ರಮಾಣದಲ್ಲಿ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಲು ಅವಕಾಶವಿರುತ್ತದೆ. ಅಲ್ಲದೆ ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ ಮತ್ತು Agricultural and Processed Food Products Export Development Authority (APEDA) ಸಂಸ್ಥೆಗಳು ಕೃಷಿ ಉತ್ಪನ್ನಗಳ ರಫ್ತು ಉತ್ತೇಜಿಸುವ ನಿಟ್ಟಿನಲ್ಲಿ ಸಕ್ರಿಯವಾಗಿ ಕಾರ್ಯ ನಿರ್ವಹಿಸುತ್ತಿವೆ. ಈ ಕಾರಣಗಳಿಂದಾಗಿ ಪ್ರತ್ಯೇಕವಾದ 'ಭತ್ತ ಅಭಿವೃದ್ಧಿ ಮಂಡಳಿ' ಸ್ಥಾಪಿಸುವ ಉದ್ದೇಶವನ್ನು ಸರ್ಕಾರ ಹೊಂದಿರುವುದಿಲ್ಲ.

ಸಂಖ್ಯೆ: ಕೃಇ 147 ಎಎಂಎಸ್ 2024.

(ಎನ್. ಚಲುವರಾಯಸ್ವಾಮಿ)

ಕೃಷಿ ಸಚಿವರು

Scanned with OKEN Sca